

ಅರುಣ ಪಿ. ಭಟ್ಟ

## ವಾರಭವಿಷ್ಯ 10.10.2019 ರಿಂದ 16.10.2019ರವರೆಗೆ.

**ಮೇಷ**

ನೀವು ಕೈಗೊಳ್ಳುವ ಕೆಲಸದಿಂದ ವಿಶ್ವಾಸಾರ್ಹತೆ ಹಾಗೂ ಪ್ರತಿಭೆ ಹೆಚ್ಚಾಗುತ್ತದೆ. ಆದರೆ ಕೆಲವು ವ್ಯಕ್ತಿಗಳು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರದ ಅಂತ್ಯಕ್ಕೆ ಸಂತೋಷ. ಸಮಯವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುತ್ತೀರಿ.

ಶುಭದಿನ: 11. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.

**ವೃಷಭ**

ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವ್ಯಾಪಾರದಲ್ಲಿ ಮುಂದಿರುತ್ತೀರಿ. ವಾರದ ದ್ವಿತೀಯಾರ್ಧದಲ್ಲಿ ಕೆಲಸಗಳಲ್ಲಿ ತೊಂದರೆ ಎದುರಾಗುತ್ತದೆ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ಅನಾರೋಗ್ಯ ಕಾಡಬಹುದು.

ಶುಭದಿನ: 14. ಕಾಲಭೈರವನ ಸೇವೆ ಮಾಡಿರಿ.

**ಮಿಥುನ**

ಸಂಬಂಧಿಕರ ಜತೆಗೆ ಉತ್ತಮ ಸಮಯ ಕಳೆಯುವ ಸಾಧ್ಯತೆ. ಯಾವುದೇ ವ್ಯವಹಾರದಲ್ಲಿಯಾದರೂ ಎಚ್ಚರಿಕೆಯಿಂದ ವ್ಯವಹರಿಸಿ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ತಲೆ – ಹಲ್ಲು ನೋವು ಕಾಡಬಹುದು.

ಶುಭದಿನ: 12. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.

**ಕಟಕ**

ವ್ಯಾಪಾರದಲ್ಲಿ ಹೊಸ ಉತ್ಪನ್ನಗಳನ್ನು ಮಾರಲು ಸಕಾಲ. ಈ ವಾರ ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಕೆಲವು ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು.

ಶುಭದಿನ: 14. ಶಿವಕವಚ ಪಠಣ ಮಾಡಿರಿ.

**ಸಿಂಹ**

ವಾರದ ಶುರುವಿನಿಂದಲೇ ಕೆಲಸ ಮುಗಿಸಲು ಪ್ರಯತ್ನ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ.

ಶುಭದಿನ: 16. ಲಿಂಗಾಷ್ಟಕ ಪಠಣ ಮಾಡಿರಿ.

**ಕನ್ಯಾ**

ವ್ಯವಹಾರವನ್ನು ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಉದ್ಯೋಗಸ್ಥರಿಗೆ ಉದ್ವಿಗ್ನವಾದ ಸನ್ನಿವೇಶ ಎದುರಾಗುತ್ತದೆ. ಈ ಅವಧಿಯಲ್ಲಿ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ವಿರಾಮಕ್ಕೆ ನಿಮ್ಮದೇ ಸಮಯ ದೊರೆಯುತ್ತದೆ.

ಶುಭದಿನ: 11. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

**ತುಲಾ**

ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಿ ಎದ್ದು ನಿಲ್ಲುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಕ್ರಮೇಣವಾಗಿ ಪ್ರಗತಿ ಕಾಣುತ್ತದೆ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ.

ಶುಭದಿನ: 15. ಸೌಂದರ್ಯ ಲಹರಿ ಪಠಿಸಿರಿ.

**ವೃಶ್ಚಿಕ**

ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ಬಹಳ ಮುಖ್ಯವಾದ ವ್ಯವಹಾರವೊಂದರ ಭಾಗೀದಾರರಾಗಿ ಅಥವಾ ನೀವೇ ಮುಖ್ಯ ಸ್ಥಾನಕ್ಕೆ ನೇಮಕ ಸಾಧ್ಯತೆ ಇದೆ. ಉದ್ಯೋಗಿಗಳಿಗೆ ವರ್ಗಾವಣೆ ಆಗುವ ಸಾಧ್ಯತೆ ಇದೆ.

ಶುಭದಿನ: 12. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.

**ಧನಸ್ಸು**

ವಾರದ ಶುರುವಿನಿಂದಲೇ ವ್ಯಾಪಾರಸ್ಥರು ಉದ್ಯೋಗಸ್ಥರು. ತಮ್ಮ ವ್ಯಾಪಾರದಲ್ಲಿ ಪ್ರಗತಿ. ನಿಮ್ಮ ಕಾರ್ಯಗಳನ್ನು ಈ ಹಿಂದೆಂದಿಗಿಂತಲೂ ವೇಗವಾಗಿ ಮಾಡಲಿದ್ದೀರಿ. ನಿಮ್ಮ ಮನಸಿನಲ್ಲಿ ಇರುವ ವಿಚಾರವನ್ನು ನೇರವಾಗಿ ಹೇಳಿ.

ಶುಭದಿನ: 12. ವಿಷ್ಣು ಸಹಸ್ರನಾಮ ಓದಿರಿ.

**ಮಕರ**

ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಶಸ್ಸು. ವಾರದ ದ್ವಿತೀಯಾರ್ಧದಲ್ಲಿ ಕಾಲು ನೋವಿನ ಸಮಸ್ಯೆ ಕಾಡಬಹುದು.

ಶುಭದಿನ: 14. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.

**ಕುಂಭ**

ವಾರದ ಶುರುವಿನಿಂದಲೇ ಉದ್ಯೋಗದಲ್ಲಿ ಸಾಧನೆ. ಸಾಮಾಜಿಕವಾಗಿ ಗೌರವ ಮನ್ನಣೆಗಳನ್ನು ಪಡೆಯಲಿದ್ದೀರಿ. ಮಕ್ಕಳ ಪ್ರಗತಿಯಿಂದ ಸಮಾಧಾನ ದೊರೆಯಲಿದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನಿರೀಕ್ಷಿತವಾದ ಯಶಸ್ಸು ದೊರೆಯಲಿದೆ.

ಶುಭದಿನ: 14. ಸುಬ್ರಮಣ್ಯ ಜಪ ಮಾಡಿರಿ.

**ಮೀನ**

ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜತೆ ಮಹತ್ತರ ಒಪ್ಪಂದಕ್ಕೆ ಸಹಿ ಹಾಕುವ ಸಾಧ್ಯತೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಶ್ವಾಸಕೋಶ ಸಮಸ್ಯೆ ಎದುರಾಗಬಹುದು.

ಶುಭದಿನ: 12. ಶ್ರೀ ದುರ್ಗಾ ಆರಾಧನೆ ಮಾಡಿರಿ.

DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ

